ಜಿಲ್ಲಾಧಿಕಾರಿಗಳ ಹಾಗೂ
ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯ
ಕೊಡಗು ಜಿಲ್ಲೆ, ಮಡಿಕೇರಿ-571201

ಕರ್ನಾಟಕ ಸರ್ಕಾರ

ಕಛೇರಿ: 08272-225500
ನಿವಾಸ: 08272-225700
ಫ್ಯಾಕ್ಸ್: 08272-225900
ಈ-ಮೇಲ್:deo.kodagu@gmail.com
ವೆಬ್ ಸೈಟ್: http://www.kodagu.nic.in

---

ಸಂಖ್ಯೆ:ಪ್ರ.ವಿ./ 4 /2018-19 ದಿನಾಂಕ: 06-09-2018

## ಅಧಿಕೃತ ಜ್ಞಾಪನ

ವಿಷಯ: ಕೊಡಗು ಜಿಲ್ಲೆಯಲ್ಲಿ ಉಂಟಾಗಿದ್ದ ಅತಿವೃಷ್ಠಿ ಸಂದರ್ಭ ತುರ್ತು ಪರಿಹಾರ ಕಾರ್ಯಕ್ಕಾಗಿ ನಿಯೋಜಿತರಾದ ಅಧಿಕಾರಿ / ಸಿಬ್ಬಂದಿಗಳನ್ನು ಬಿಡುಗಡೆಗೊಳಿಸುವ ವಿಚಾರ.

ಉಲ್ಲೇಖ: ಈ ಕಚೇರಿ ಅಧಿಕೃತ ಜ್ಞಾಪನ ಸಮ ಸಂಖ್ಯೆ ದಿನಾಂಕ 19.08.2018

---

ಕೊಡಗು ಜಿಲ್ಲೆಯಲ್ಲಿ ಕೆಲ ದಿನಗಳ ಹಿಂದೆ ಆದ ಭಾರೀ ಗಾಳಿ ಮಳೆಯಿಂದ ಮಡಿಕೇರಿ ನಗರದ ಸುತ್ತಮುತ್ತ ಹಾಗೂ ಜಿಲ್ಲೆಯ ಹಲವೆಡೆ ಜಲಾವೃತ ಮತ್ತು ಭೂಕುಸಿತದಿಂದ ಮಾನವ / ಜಾನುವಾರು ಜೀವಹಾನಿ, ಮನೆಹಾನಿ, ರಸ್ತೆಹಾನಿ ಸೇರಿದಂತೆ ಹಲವು ನಷ್ಟಗಳು ಆಗಿರುತ್ತದೆ. ಈ ಸಂದರ್ಭದಲ್ಲಿ ತುರ್ತು ಪರಿಹಾರ ಕ್ರಮಕ್ಕಾಗಿ ಸಹಕರಿಸಲು ಉಲ್ಲೇಖದ ಅಧಿಕೃತ ಜ್ಞಾಪನದಂತೆ ಅಧಿಕಾರಿ / ಸಿಬ್ಬಂದಿಗಳನ್ನು ನಿಯೋಜಿಸಲಾಗಿತ್ತು. ನಿಯೋಜಿತ ಎಲ್ಲಾ ಅಧಿಕಾರಿ ಮತ್ತು ಸಿಬ್ಬಂದಿಗಳು ಸಮರೋಪಾದಿ ಮತ್ತು ಪ್ರಶಂಸನೀಯ ರೀತಿಯಲ್ಲಿ ಜಿಲ್ಲಾಡಳಿತಕ್ಕೆ ಸಹಕಾರ ನೀಡಿರುತ್ತಾರೆ.

ಪ್ರಸ್ತುತ, ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ತೆರೆಯಲಾಗಿದ್ದ ಆಹಾರ ಸಾಮಾಗ್ರಿ ದಾಸ್ತಾನು ಕೇಂದ್ರವನ್ನು ಸರ್ಕಾರಿ ಪದವಿ ಪೂರ್ವ ಕಾಲೇಜು, ಮಡಿಕೇರಿ ಇಲ್ಲಿಗೆ ಸ್ಥಳಾಂತರಿಸಿರುವುದರಿಂದ ಸದರಿ ಅಧಿಕೃತ ಜ್ಞಾಪನದ ಈ ಕೆಳಕಂಡ ಸಿಬ್ಬಂದಿಗಳನ್ನು ದಿನಾಂಕ 06.09.2018ರ ಅಪರಾಹ್ನದಂದು ಬಿಡುಗಡೆಗೊಳಿಸಿದೆ.

*1) ಶ್ರೀ ಅರುಣ್ ಕುಮಾರ್, ಪ್ರ.ದ.ಸ., ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಮಡಿಕೇರಿ.*

*2) ಶ್ರೀ ಅಶ್ವಿನ್ ಕುಮಾರ್, ದ್ವಿ.ದ.ಸ., ಜಂಟಿ ಕೃಷಿ ನಿರ್ದೇಶಕರ ಕಚೇರಿ, ಮಡಿಕೇರಿ*

(ಕ.ಟಿ.ಜಿ.ಅ.ಮೇ.)

ಅಪರ ಜಿಲ್ಲಾಧಿಕಾರಿ,
ಕೊಡಗು ಜಿಲ್ಲೆ, ಮಡಿಕೇರಿ.

ಪ್ರತಿಯನ್ನು:

1. ಸಂಬಂಧಪಟ್ಟ ಇಲಾಖಾಧಿಕಾರಿಗಳಿಗೆ ಮಾಹಿತಿಗಾಗಿ.
2. ಸಂಬಂಧಪಟ್ಟ ಇಲಾಖಾ ಸಿಬ್ಬಂದಿಗಳಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.